ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(2)ಪ್ರಾಶಿಅ/ವರ್ಗಾವಣೆ ಪತ್ರ/20/2021-22 ದಿನಾಂಕ: 25/11/2021

**ಜ್ಞಾಪನಾ**

ವಿಷಯ: ಶಾಲೆಗಳಲ್ಲಿ ವಿದ್ಯಾರ್ಥಿಗಳ ವರ್ಗಾವಣೆ ಪತ್ರವನ್ನು ಸಕಾಲದಲ್ಲಿ ವಿತರಿಸುವ ಕುರಿತಂತೆ.

ಉಲ್ಲೇಖ: 1) ರಾಜ್ಯ ಸರ್ಕಾರದ ಪತ್ರ ಸಂಖ್ಯೆ:ಇಪಿ.337.ಪಿಜಿಸಿ.2021, ದಿನಾಂಕ:15/11/2021.

2) ಪೋಷಕರ ಮನವಿಗಳು

3) ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ಉತ್ತರ ವಲಯ-1 ಇವರ ಪತ್ರ ದಿನಾಂಕ:17/9/2021.

4) ಆಡಳಿತ ಮಂಡಳಿಗಳ ಒಕ್ಕೂಟ ಹಾಗೂ ಸಂಘ ಸಂಸ್ಥೆಗಳ ಮನವಿಗಳು.

5) ದೆಹಲಿ ಉಚ್ಚನ್ಯಾಯಾಲಯ, ಮದ್ರಾಸ್ ಉಚ್ಚನ್ಯಾಯಾಲಯದಲ್ಲಿ ನೀಡಿರುವ ತೀರ್ಪುಗಳು.

6) ಸರ್ಕಾರದ ಪತ್ರದ ಸಂಖ್ಯೆ: ಇಡಿ 337 ಪಿಜಿಸಿ 2021, ದಿನಾಂಕ:24-11-2021.

******

**ಪ್ರಸ್ತಾವನೆ:**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2) ಮತ್ತು (3)ರಲ್ಲಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರು ಆರ್ಥಿಕ ಸಂಕಷ್ಟದಿಂದಾಗಿ ತಮ್ಮ ಮಕ್ಕಳನ್ನು ಆ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿಸಲು ಸಾಧ್ಯವಾಗದೇ ಇರುವುದರಿಂದ ಅಂತಹ ಮಕ್ಕಳನ್ನು ಸರ್ಕಾರಿ, ಅನುದಾನಿತ ಮತ್ತು ಇತರೆ ಶಾಲೆಗಳಿಗೆ ದಾಖಲು ಮಾಡಿ ಈ ವಿದ್ಯಾರ್ಥಿಗಳ ವರ್ಗಾವಣೆ ಪತ್ರವನ್ನು ವಿತರಿಸಬೇಕೆಂದು ಸಂಬಂಧಪಟ್ಟ ಖಾಸಗಿ ಅನುದಾನರಹಿತ ಶಾಲೆಗಳಿಗೆ ಮನವಿಯನ್ನು ಸಲ್ಲಿಸಿದ್ದರೂ, ಸದರಿ ಆಡಳಿತ ಮಂಡಳಿಗಳು ವರ್ಗಾವಣೆ ಪತ್ರವನ್ನು ವಿತರಿಸಿರುವುದಿಲ್ಲವೆಂದು ಮನವಿಯನ್ನು ಸಲ್ಲಿಸಿರುತ್ತಾರೆ. ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಪಟ್ಟ ಶಾಲೆಗೆ ವರ್ಗಾವಣೆ ಪತ್ರವನ್ನು ವಿತರಿಸುವಂತೆ ತಿಳಿಸಿದ್ದರೂ ವರ್ಗಾವಣೆ ಪತ್ರವನ್ನು ವಿತರಿಸದೇ ವಿಳಂಬ ಮಾಡುತ್ತಿದ್ದು ಇಂತಹ ವಿದ್ಯಾರ್ಥಿಗಳು ಅಧಿಕೃತವಾಗಿ ಶಾಲೆಗೆ ದಾಖಲಾಗದೇ ಶೈಕ್ಷಣಿಕ ಪ್ರಗತಿಗೆ ಆತಂಕದಲ್ಲಿ ಸಿಲಿಕಿರುತ್ತಾರೆ.

ಈಗಾಗಲೇ 2021-22ನೇ ಸಾಲಿನ ಶೈಕ್ಷಣಿಕ ವರ್ಷವು ಪ್ರಾರಂಭವಾಗಿ ಅರ್ಧ ವಾರ್ಷಿಕ ಮುಕ್ತಾಯವಾಗಿದ್ದು ಮಕ್ಕಳು ಈವರೆಗೂ ಅಧಿಕೃತವಾಗಿ ದಾಖಲಾತಿಯಾಗದೇ ಶೈಕ್ಷಣಿಕ ಚಟುವಟಿಕೆಗಳಿಂದ ವಂಚಿತರಾಗಿರುತ್ತಾರೆ, ಈ ಬಗ್ಗೆ ರಾಷ್ಟ್ರದ ವಿವಿಧ ರಾಜ್ಯಗಳ ರಾಜ್ಯ ಉಚ್ಚನ್ಯಾಯಾಲಯಗಳಲ್ಲಿ ದಾಖಲಾಗಿರುವ ದಾವೆಗಳು ದೆಹಲಿ ಉಚ್ಚನ್ಯಾಯಾಲಯದ ದಾವೆ ಸಂಖ್ಯೆ 6658/2019, ಸಿ.ಎಂ.ಅಪೀಲ್ 30816/2019, 12950/2018 & ಸಿ.ಎಂ.ಅಪೀಲ್.50240/2018, ಮದ್ರಾಸ್ ಉಚ್ಚನ್ಯಾಯಾಲಯದ ದಾವೆ ಸಂಖ್ಯೆ:ರಿ.ಪಿ :20726/2019, ದಾವೆ ಸಂಖ್ಯೆ: 6621/2021, ದಾವೆ ಸಂಖ್ಯೆ: 29359/2017, ರಿ.ಪಿ.ಸಂ:16376/2021 ಇವುಗಳಲ್ಲಿ ನೀಡಿರುವ ತೀರ್ಪಿನ ಅಡಿಯಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆಯಿಂದ ವಂಚಿತರಾಗದಂತೆ ಅವರ ಶೈಕ್ಷಣಿಕ ಚಟುವಟಿಕೆಗಳು ಮುಂದುವರೆಯಲು ವಿದ್ಯಾರ್ಥಿ/ವಿದ್ಯಾರ್ಥಿನಿಯ ಪೋಷಕರು ಬಯಸಿದಲ್ಲಿ ಆರ್.ಟಿ.ಇ ಕಾಯ್ದೆ ಸೆಕ್ಷನ್-2 ಹಾಗೂ 5 ಮತ್ತು ಉಪ ಸೆಕ್ಷನ್ ಗಳ ಅನ್ವಯ ಅರ್ಜಿ ಸಲ್ಲಿಸಿದ 15 ದಿನಗಳ ಒಳಗಾಗಿ ವರ್ಗಾವಣೆ ಪತ್ರವನ್ನು ನೀಡಬೇಕಾಗುತ್ತದೆ.

ಈ ಸಂಬಂಧ ಇಲಾಖೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ನಿಯಮಗಳನ್ನು ಹಾಗೂ ಆರ್.ಟಿ.ಇ ಸೆಕ್ಷನ್-2 ಹಾಗೂ 5 ಮತ್ತು ಉಪ ಸೆಕ್ಷನ್ ಗಳ ಅಡಿಯಲ್ಲಿ ಈಗಾಗಲೇ ಜಾರಿಗೆ ತಂದಿರುವ ಆರ್.ಟಿ.ಇ ನಿಯಮ 2012ಕ್ಕೆ ತಿದ್ದುಪಡಿಗಳನ್ನು ರಚಿಸಲಾಗುತ್ತಿದೆ, ಈ ನಿಯಮಗಳನ್ನು ಜಾರಿಗೆ ತರಲು ಕಾಲಾವಕಾಶವಾಗುವುದರಿಂದ 2021-22ನೇ ಸಾಲಿನಲ್ಲಿ ಬೇರೆ ಶಾಲೆಗಳಿಗೆ (ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ) ದಾಖಲಾಗಿರುವ ವಿದ್ಯಾರ್ಥಿಗಳ ವರ್ಗಾವಣೆ ಪತ್ರವನ್ನು ಖಾಸಗಿ ಅನುದಾನರಹಿತ ಶಾಲೆಗಳು ವಿತರಿಸದೇ ವಿಳಂಬ ಮಾಡುತ್ತಿದ್ದು ಇಂತಹ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗುತ್ತಿರುವುದರಿಂದ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಗಣಿಸಿ ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 133ರ ಹಾಗೂ ಸೆಕ್ಷನ್ 106(2)(ಬಿ)ರ ಅಡಿಯಲ್ಲಿ ವರ್ಗಾವಣೆ ಪತ್ರ ವಿತರಣೆ ಮಾಡಲು ಕ್ರಮವಹಿಸುವಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ:**

ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರು ತಮ್ಮ ಮಕ್ಕಳನ್ನು **ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ದಾಖಲಾತಿ ಮಾಡಿದ್ದು** ಆ ಶಾಲೆಗೆ ವರ್ಗಾವಣೆ ಪತ್ರವನ್ನು ವಿತರಿಸುವಂತೆ ಕೋರಿಕೆ ಸಲ್ಲಿಸಿದ್ದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ 2009ರ ಹಾಗೂ ಮಕ್ಕಳ

ಹಕ್ಕುಗಳ ರಕ್ಷಣಾ ನೀತಿ 2016ರ ಅಡಿಯಲ್ಲಿ ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 133ರಡಿಯಲ್ಲಿ ಅಂತಹ ವರ್ಗಾವಣೆ ಪತ್ರವನ್ನು ಒಂದು ವಾರದೊಳಗೆ ವಿತರಿಸಲು ಆದೇಶಿಸಿದೆ.

ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ಒಂದುವಾರದೊಳಗೆ ಕಡ್ಡಾಯವಾಗಿ ವರ್ಗಾವಣೆ ಪತ್ರವನ್ನು ವಿತರಿಸುವುದು. ವಿಫಲವಾದಲ್ಲಿ ಪೋಷಕರು ಸಂಬಂಧಪಟ್ಟ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸುವುದು. ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆ ಶಾಲೆಯ ಆಡಳಿತ ಮಂಡಳಿ ಮತ್ತು ಮುಖ್ಯ ಶಿಕ್ಷಕರಿಗೆ ಒಂದುವಾರದೊಳಗೆ ವರ್ಗಾವಣೆ ಪತ್ರವನ್ನು ವಿತರಿಸುವಂತೆ ತಿಳುವಳಿಕೆ ಪತ್ರ ನೀಡುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ನೀಡಿದ ಕಾಲಾವಧಿಯಲ್ಲಿ ವರ್ಗಾವಣೆ ಪತ್ರ ನೀಡಲು ವಿಫಲವಾದ ಆಡಳಿತ ಮಂಡಳಿ ಮತ್ತು ಮುಖ್ಯ ಶಿಕ್ಷಕರ ವಿರುದ್ಧ ಕಾನೂನಿನ ಅಡಿ ಕ್ರಮವಹಿಸಿ ಮಕ್ಕಳು ಶೈಕ್ಷಣಿಕ ಚಟುವಟಿಕೆಗಳಿಂದ ವಂಚಿತರಾಗದಂತೆ ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮ 1983ರ ಸೆಕ್ಷನ್ 106(2)(ಬಿ) ರಲ್ಲಿ ತಿಳಿಸಿರುವಂತೆ ಕ್ರಮವಹಿಸಲು ಸೂಚಿಸಿದೆ.

[ಸರ್ಕಾರದಿಂದ ಅನುಮೋದಿತಗೊಂಡಿದೆ]

25/11/2021

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
3) ರಾಜ್ಯದ ಎಲ್ಲಾ ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ಮತ್ತು ಆಡಳಿತ ಮಂಡಳಿಗೆ (ಈ ಆದೇಶವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ರವಾನಿಸಲು ಸೂಚಿಸಿದೆ)

ಪ್ರತಿಯನ್ನು

1) ಆಪ್ತ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಹಾಗೂ ಸಕಾಲ ಸಚಿವರ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ಇವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
4) ಕಛೇರಿ ಪ್ರತಿ.